155ನೆ6 ನಿ-72= (46) 4pm 0309

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಹೇಳಿಕೆ**

ಕಳೆದ ಒಂದು ವರ್ಷದಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳು ಒಂದಲ್ಲ ಒಂದು ಗೊಂದಲಕ್ಕೆ/ ಅವಾಂತರಗಳಿಗೆ ಈಡಾಗುತ್ತಿರುವುದು ನೋವಿನ ಸಂಗತಿ ಒಂದೆಡೆಯಾದರೆ ಸದರಿ ಆಯೋಗವು ನಡೆಸುವ ಪರೀಕ್ಷೆಯಲ್ಲಿನ ನ್ಯೂನತೆಗಳಿಗೆ ಹೊಣೆ ಯಾರು? ಹೊಣೆಯಾದವರ ವಿರುದ್ಧ ಯಾವ ಕ್ರಮಗಳನ್ನು ಸಹ ಜರುಗಿಸದೇ ಇರುವುದು ದುರದೃಷ್ಟಕರ ಸಂಗತಿ ಇನ್ನೊಂದೆಡೆಯಾಗಿದೆ. ರಾಜ್ಯದಲ್ಲಿನ ಕರ್ನಾಟಕ ಲೋಕಸೇವಾ ಆಯೋಗದ ಸರಣಿ ಯಡವಟ್ಟಿನಿಂದಾಗಿ ಉದ್ಯೋಗಾಕಾಂಕ್ಷಿಗಳು ಕಂಗಾಲಾಗಿರುವ ಕುರಿತು ಸರ್ಕಾರದ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ**

ಕರ್ನಾಟಕ ಲೋಕಸೇವಾ ಆಯೋಗವು ಜನವರಿ 2024ರಿಂದ ಇಲ್ಲಿಯವರೆಗೆ 12 ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಒಟ್ಟು 1734 ಹುದ್ದೆಗಳಿಗೆ 37 ಪತ್ರಿಕೆಗಳಿಗೆ ಒಟ್ಟಾರೆ 11,40,292 ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಾವುದೇ ಲೋಪ ದೋಷಗಳಿಲ್ಲದೆ ಸುಲಲಿತವಾಗಿ ನಡೆಸಲಾಗಿರುತ್ತದೆ. ಸದರಿ ಪರೀಕ್ಷೆಗಳ ಪೈಕಿ ದಿನಾಂಕ:27-08-2024ರಂದು ನಡೆದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಪರೀಕ್ಷೆ ಹಾಗೂ ದಿನಾಂಕ:29-12-2024ರಂದು ಗೆಜೆಟೆಡ್ ಪ್ರೊಬೆಷನರ್ಸ್ ಪೂರ್ವಭಾವಿ ಮರು ಪರೀಕ್ಷೆಗಳಲ್ಲಿ ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಭಾಷಾಂತರ ಲೋಪದೋಷಗಳ ಬಗ್ಗೆ ವರದಿಯಾಗಿದ್ದು, ಈ ಸಂಬಂಧ ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಭಾಷಾಂತರ ಮತ್ತು ತಾಂತ್ರಿಕ ದೋಷದಿಂದಾಗಿ ಕೆಲವು ಪ್ರಶ್ನೆಗಳಿಗೆ ಕೃಪಾಂಕ ಹಾಗೂ ಕೆಲವು ಪ್ರಶ್ನೆಯ ಕೀ-ಉತ್ತರವನ್ನು ಪರಿಷ್ಕರಿಸಬೇಕೆಂದು, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಳ್ಳಬಹುದೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಾಗಿರುವುದಾಗಿಯೂ ಹಾಗೂ ಇನ್ನುಳಿದ ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸವಿರುವುದಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ.

ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆಂಗ್ಲ ಮತ್ತು ಕನ್ನಡ ಎರಡೂ ಭಾಷೆಗಳಲ್ಲಿ ಪ್ರಶ್ನೆಗಳನ್ನು ಸಿದ್ಧಪಡಿಸಿ ವಿಷಯ ತಜ್ಞರು ನೀಡುತ್ತಾರೆ ಕೆಲವು ಬಾರಿ ಆಂಗ್ಲ ಭಾಷೆಯಲ್ಲಿರುವಂತಹ ಪ್ರಶ್ನೆಗಳನ್ನು ಕನ್ನಡಕ್ಕೆ ಭಾಷಾಂತರಿಸಲು ಭಾಷಾಂತರಕಾರರ ನೆರವನ್ನು ಪಡೆಯಲಾಗುತ್ತಿದ್ದು, ಪ್ರಶ್ನೆಗಳ ಗೋಪ್ಯತೆಯನ್ನು ಕಾಪಾಡುವ ದೃಷ್ಟಿಯಿಂದ ಪ್ರಶ್ನೆಗಳನ್ನು ಆಯೋಗದ ಅಧಿಕಾರಿ/ ಸಿಬ್ಬಂದಿಗಳು ಮತ್ತೊಮ್ಮೆ ಪರಿಶೀಲಿಸುವ ಪದ್ಧತಿ ಇರುವುದಿಲ್ಲ.

ಮುಂದುವರೆದು, ದಿನಾಂಕ:23-01-2025ರಂದು ಮುಖ್ಯ ಕಾರ್ಯದರ್ಶಿಯವರು ಸಭೆ ನಡೆಸಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗಗಳ ಸಹಯೋಗದೊಂದಿಗೆ ಒಂದು ಕನ್ನಡ ಭಾಷಾ ತಜ್ಞರ ತಂಡವನ್ನು ರಚಿಸಲು ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ:ಸಿಆಸುಇ 47 ಎಸ್‌ಎಲ್‌ಎ 2025.**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ